# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 600 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಸ್ ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 13/12/2024 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಯಾವ ವಲಯದ ಅಸಂಘಟಿತ ಕಾರ್ಮಿಕರು ಅಂಬೇಡ್ಕರ್ ಕಾರ್ಮಿಕರ ಸಹಾಯಹಸ್ತ ಯೋಜನೆಯಡಿ ನೆರವನ್ನು ಪಡೆಯಬಹುದಾಗಿದೆ; ಈ ಯೋಜನೆಯಡಿ ನೋಂದಾಯಿಸಿಕೊಳ್ಳಲು ರೂಪಿಸಿರುವ ಮಾರ್ಗಸೂಚಿಗಳೇನು; | ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ **ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ 21 ವರ್ಗಗಳ ಅಸಂಘಟಿತ ಕಾರ್ಮಿಕರಾದ** "ಕ್ಷೌರಿಕರು, ಗೃಹ ಕಾರ್ಮಿಕರು, ಅಕ್ಕಸಾಲಿಗರು, ಹಮಾಲರು, ಕಮ್ಮಾರರು, ಚಿಂದಿ ಆಯುವವರು, ಟೈಲರ್ಸ್, ಮಂಡಕ್ಕಿ ಭಟ್ಟಿ ಕಾರ್ಮಿಕರು, ಕುಂಬಾರರು, ಅಗಸರು, ಬೀದಿಬದಿ ವ್ಯಾಪಾರಿಗಳು, ಸಿನಿ ಕಾರ್ಮಿಕರು, ಹೋಟೆಲ್ ಕಾರ್ಮಿಕರು, ಫೋಟೋಗ್ರಾಫರ್ಸ್, ನೇಕಾರರು, ಬೀಡಿ ಕಾರ್ಮಿಕರು, ಸ್ವತಂತ್ರ ಲೇಖನ ಬರಹಗಾರರು, ಕಲ್ಯಾಣ ಮಂಟಪ/ ಸಭಾ ಭವನ/ ಟೆಂಟ್/ ಪೆಂಡಾಲ್‌ಗಳ ಕೆಲಸ ನಿರ್ವಹಿಸುವ ಎಲ್ಲಾ ಕಾರ್ಮಿಕರು, ಅಸಂಘಟಿತ ವಿಕಲಚೇತನ ಕಾರ್ಮಿಕರು, ಅಲೆಮಾರಿ ಪಂಗಡಕ್ಕೆ ಸೇರಿದ ಅಸಂಘಟಿತ ಕಾರ್ಮಿಕರು, ಹಗ್ಗ ಸಿದ್ಧಪಡಿಸುವ (ಭೈಜಂತ್ರಿ)" ಕಾರ್ಮಿಕರು ನೆರವನ್ನು ಪಡೆಯಬಹುದಾಗಿದೆ.<br><br>ಈ ಯೋಜನೆಯಡಿ ನೋಂದಾಯಿಸಿಕೊಳ್ಳಲು ನಿಗದಿಪಡಿಸಿರುವ ಮಾನದಂಡಗಳು ಈ ಕೆಳಗಿನಂತಿವೆ.<br>➢ ನೋಂದಣಿಗಾಗಿ ಮಂಡಳಿಯ www.ksuwssb.karnataka.gov.in ಪೋರ್ಟಲ್‌ನಲ್ಲಿ ಈ ಕೆಳಕಂಡ ದಾಖಲೆಗಳೊಂದಿಗೆ ನೋಂದಣಿ ಮಾಡಿಕೊಳ್ಳುವುದು.<br>➢ ಈ ಯೋಜನೆಯು ಕರ್ನಾಟಕ ರಾಜ್ಯದ ನಿವಾಸಿಗಳಿಗೆ ಮಾತ್ರ ಅನ್ವಯವಾಗುತ್ತದೆ.<br>➢ ಅರ್ಜಿದಾರರ ವಯೋಮಿತಿ 18 ರಿಂದ 60 ವರ್ಷಗಳು.<br>➢ ಆದಾಯ ತೆರಿಗೆ ಪಾವತಿದಾರರಾಗಿರಬಾರದು.<br>➢ ಇ.ಎಸ್.ಐ ಮತ್ತು ಇ.ಪಿ.ಎಫ್ ಸೌಲಭ್ಯ ಹೊಂದಿರಬಾರದು. |
| ಆ) | ಎಷ್ಟು ಅಸಂಘಟಿತ ಕಾರ್ಮಿಕರನ್ನು ಈ ಯೋಜನೆಯಡಿ ತರಲು ಉದ್ದೇಶಿಸಲಾಗಿದೆ; | ಈ ಯೋಜನೆಯಡಿ ಮೇಲ್ಕಂಡ 21 ಅಸಂಘಟಿತ ವರ್ಗಗಳಿಗೆ ಸೇರಿದ ಸುಮಾರು 32.00ಲಕ್ಷ ಕಾರ್ಮಿಕರನ್ನು ಯೋಜನೆಯ ವ್ಯಾಪ್ತಿಗೆ ತರಲು ಉದ್ದೇಶಿಸಲಾಗಿದೆ. |

| | | |
|---|---|---|
| ಇ) | ಈ ಕಾರ್ಮಿಕರಿಗೆ ಒದಗಿಸಲು ಉದ್ದೇಶಿಸಿರುವ ಸೌಲಭ್ಯಗಳೇನು ಈ ಸೌಲಭ್ಯಗಳನ್ನು ಒದಗಿಸಲು ಮೀಸಲಿಟ್ಟಿರುವ ಅನುದಾನವೆಷ್ಟು? (ಸಂಪೂರ್ಣ ಮಾಹಿತಿ ನೀಡುವುದು) | ಈ ಯೋಜನೆಯಡಿ ನೋಂದಾಯಿತರಾದ 21 ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಕೆಳಕಂಡ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br>**(ಅ) ಅಪಘಾತ ಪರಿಹಾರ ಸೌಲಭ್ಯ**<br>1. ಮರಣ ಪ್ರಕರಣ _ ರೂ. 1.00 ಲಕ್ಷ.<br>2. ಅಪಘಾತದಿಂದುಟಾಗುವ ಸಂಪೂರ್ಣ ಶಾಶ್ವತ/ ಭಾಗಶಃ ದುರ್ಬಲತೆ ಪರಿಹಾರ (ಶೇಕಡವಾರು ದುರ್ಬಲತೆ ಆಧಾರದ ಮೇಲೆ) -ರೂ.1.00 ಲಕ್ಷದವರೆಗೆ .<br>3. ಆಸ್ಪತ್ರೆ ವೆಚ್ಚ ಮರುಪಾವತಿ -ರೂ.50,000/- ಗಳವರೆಗೆ.<br>**(ಆ) ಸಹಜ ಮರಣ ಪರಿಹಾರ (ಅಂತ್ಯಕ್ರಿಯೆ ಧನಸಹಾಯ)**<br>ನೋಂದಾಯಿತ ಫಲಾನುಭವಿಯು ವಯೋಸಹಜ/ ಖಾಯಿಲೆ/ ಅಕಾಲಿಕ ಅಥವಾ ಇನ್ನಿತರೆ ಕಾರಣಗಳಿಂದ ಮರಣ ಹೊಂದಿದಲ್ಲಿ ಫಲಾನುಭವಿಯ ಕುಟುಂಬದವರಿಗೆ ಅಂತ್ಯಕ್ರಿಯೆ ವೆಚ್ಚಕ್ಕಾಗಿ ರೂ.10,000/-ಗಳ ಧನ ಸಹಾಯ ಸೌಲಭ್ಯ ಒದಗಿಸಲಾಗುತ್ತಿದೆ.<br>ಮೇಲ್ಕಂಡ ಯೋಜನೆಯ ಜಾರಿಗಾಗಿ ಪ್ರಸಕ್ತ ಸಾಲಿನಲ್ಲಿ ಸರ್ಕಾರವು ರೂ.12.50 ಕೋಟಿ ಅನುದಾನವನ್ನು ಹಂಚಿಕೆ ಮಾಡಿರುತ್ತದೆ. |

**ಕಾಇ 555 ಎಲ್‌ಇಟಿ 2024**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**